ಕನ್ನಡಪ್ರಭ
ಸೋಮವಾರ 4.05.2026

ಗರಿಷ್ಠ 34°C | ಕನಿಷ್ಠ 23°C

ಸುದ್ದಿ ಸಿಂಚನ

ಗೊರುಕನ ಪುಟವಿನ್ಯಾಸಕ ಮಹದೇವಸ್ವಾಮಿ ನಿಧನ




ಚಾಮರಾಜನಗರ: ಗೊರುಕನ ಪತ್ರಿಕೆಯ ಪುಟ ವಿನ್ಯಾಸಕರಾದ ಪಿ. ಮಹದೇವಸ್ವಾಮಿ (33) ಅನಾರೋಗ್ಯದಿಂದ ಭಾನುವಾರ ನಿಧನರಾದರು. ತಾಲೂಕಿನ ಉಡಿಗಾಲ ಗ್ರಾಮದ ವಾಸಿಯಾಗಿದ್ದ ಇವರು ಕಳೆದ 12 ವರ್ಷಗಳಿಂದ ಗೊರುಕನ ಪತ್ರಿಕೆಯ ಪುಟ ವಿನ್ಯಾಸಕರಾಗಿ ಕೆಲಸ ನಿರ್ವಹಿಸುತ್ತಿದ್ದರು. ಮೃತರು ಪತ್ನಿ, ಇಬ್ಬರು ಪುತ್ರಿಯರು, ತಂದೆ, ತಾಯಿ ಹಾಗೂ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯು ಸ್ವಗ್ರಾಮವಾದ ಉಡಿಗಾಲದಲ್ಲಿ ನೆರವೇರಲಿದೆ. ಮಹದೇವಸ್ವಾಮಿ ಅವರ ನಿಧನಕ್ಕೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷರಾದ ಆರ್.ಎನ್. ಸಿದ್ದಲಿಂಗಸ್ವಾಮಿ, ಪ್ರಧಾನ ಕಾರ್ಯದರ್ಶಿ ಪ್ರಸಾದ್ ಎಸ್. ಲಕ್ಕೂರು, ಪದಾಧಿಕಾರಿಗಳು, ಕಾರ್ಯಕಾರಿಣಿ ಸದಸ್ಯರು ಸಂತಾಪ ಸೂಚಿಸಿದ್ದಾರೆ.

ನಾಡಿದ್ದು 'ಲಕ್ಷ್ಯ' ಕವನ ಸಂಕಲನದ ಲೋಕಾರ್ಪಣೆ

ಚಾಮರಾಜನಗರ: ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ವತಿಯಿಂದ ಮೇ 6ರ ಬುಧವಾರ ಬೆಳಗ್ಗೆ 10 ಗಂಟೆಗೆ ಚಾಮರಾಜನಗರದ ವರನಟ ಡಾ. ರಾಜಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ಕಟ್ನವಾಡಿ ಗ್ರಾಮದ ರಶ್ಮಿ ಎಂ. ಮತ್ತು ಶ್ರೀ ಕೆ.ಎನ್. ನಂದೀಶಪ್ಪ ಇವರ ಪುತ್ರಿ ಡಾ. ಮಮತಾ ಲೋಕೇಶ್ವರಿ ಎಂ. ರವರ 'ಲಕ್ಷ್ಯ' ಕವನ ಸಂಕಲನದ ಲೋಕಾರ್ಪಣಾ ಸಮಾರಂಭವನ್ನು ಆಯೋಜಿಸಲಾಗಿದೆ. ಅಂದು ಬೆಳಗ್ಗೆ ಕಾರ್ಯಕ್ರಮದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರು ದಿವ್ಯ ಸಾನ್ನಿಧ್ಯ ವಹಿಸಿ ಕೃತಿ ಲೋಕಾರ್ಪಣೆ ಮಾಡುವರು. ಈ ಸಮಾರಂಭ ವನ್ನು ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ಸಿ. ಸೋಮಶೇಖರ (ನಿವೃತ್ತ ಐಎಎಸ್) ಅವರು ಉದ್ಘಾಟನೆ ಮಾಡುವರು. ಮಾಜಿ ಸಚಿವೆ, ಕವಯಿತ್ರಿ ಗೀತಾ ಮಹಾದೇವ ಪ್ರಸಾದ್‌ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಹಿರಿಯ ಸಾಹಿತಿ ಪ್ರೊ. ಎಸ್. ಶಿವರಾಜಪ್ಪನವರು ಕೃತಿ ಕುರಿತು ಮಾತನಾಡುವರು. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶ್ರೀ ಬಿ.ಕೆ. ರವಿಕುಮಾರ್ ಹಾಗೂ ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಕೆ. ವಸಂತಮ್ಮನವರು ಹಾಗೂ ಕವಿಯಿತ್ರಿ ಡಾ. ಮಮತಾ ಲೋಕೇಶ್ವರಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಸಮಾರಂಭದ ಆರಂಭದಲ್ಲಿ ವಚನ ಗಾಯನ ಕಾರ್ಯಕ್ರಮವಿರುತ್ತದೆ ಹಾಗೂ ಕಾರ್ಯಕ್ರಮ ಮುಕ್ತಾಯದ ನಂತರ ಪ್ರಸಾದ ವ್ಯವಸ್ಥೆ ಇರುತ್ತದೆ. ಈ ಕಾರ್ಯಕ್ರಮಕ್ಕೆ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಬೇಕೆಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಪ್ರಕಟಣೆಯಲ್ಲಿ ಕೋರಿರುತ್ತಾರೆ.

ಜೆಎಸ್‌ಎಸ್ ಕಾಲೇಜಿನಲ್ಲಿ ವಿಶ್ವ ಪುಸ್ತಕ ದಿನಾಚರಣೆ



ಕೊಳ್ಳೇಗಾಲ: ಪಟ್ಟಣದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರ ವತಿಯಿಂದ ವಿಶ್ವ ಪುಸ್ತಕ ಮತ್ತು ಹಕ್ಕು ಸ್ವಾಮ್ಯ ದಿನಾಚರಣೆಯನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಸಂಸ್ಥೆಯ ಐಕ್ಯೂಎಸಿ ಸಂಚಾಲಕಿ ಎಸ್ ಮಮತ ಮಾತನಾಡಿ, ಡಿಜಿಟಲ್ ಯುಗದಲ್ಲಿ ಪುಸ್ತಕಗಿಂತ ಉತ್ತಮ ಸ್ನೇಹಿತರಿಲ್ಲ. ಗ್ರಂಥಾಲಯದ ಬಳಕೆಯಿಂದ ಜ್ಞಾನಾರ್ಜನೆ ಹೆಚ್ಚಿಸಿಕೊಳ್ಳಬಹುದು, ಪುಸ್ತಕ ಓದುವ ಮೂಲಕ ಎಲ್ಲರೂ ಪ್ರಭುದ್ಧರಾಗಿ, ಪುಸ್ತಕಗಳು ಮಾರ್ಗದರ್ಶನ ನೀಡುವುದರ ಜೊತೆಗೆ ವ್ಯಕ್ತಿಯ ವ್ಯಕ್ತಿತ್ವ ವೃದ್ಧಿಸಲು ಸಹಾಯ ಮಾಡುತ್ತೇವೆ ಎಂದರು. ಪ್ರಾಂಶುಪಾಲ ಡಾ. ಎಸ್. ಕೊಂಗಳಪ್ಪ, ಗ್ರಂಥಪಾಲಕ ಎಸ್. ಮಹದೇವಸ್ವಾಮಿ ಇನ್ನಿತರಿದ್ದರು.



ಗುಂಡ್ಲುಪೇಟೆ ತಾಲೂಕಿನ ಮಾದಾಪಟ್ಟಣದಲ್ಲಿ ₹20 ಲಕ್ಷ ವೆಚ್ಚದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಭವನಕ್ಕೆ ಶಾಸಕ ಎಚ್.ಎಂ.ಗಣೇಶ್ ಪ್ರಸಾದ್ ಭೂಮಿ ಪೂಜೆ ನೆರವೇರಿಸಿದರು. ಸಮಾಜ ಸೇವಕ ಗೋಪಾಲ್ ಹೊರೆಯಾಲ, ಮುಖಂಡರಾದ ಸುಭಾಷ್, ರಾಘವಾಪುರ ಮಹೇಶ್ ಸೇರಿದಂತೆ ಗ್ರಾಮಸ್ಥರು ಇದ್ದರು.



ಕೊಳ್ಳೇಗಾಲದ ಜೆಎಸ್‌ಎಸ್ ಕಾಲೇಜಿನಲ್ಲಿ ಆಯೋಜಿಸಲಾಗಿದ್ದ ವಿಶ್ವ ಪುಸ್ತಕ ದಿನ ಕಾರ್ಯಕ್ರಮದಲ್ಲಿ ಮಹದೇವಸ್ವಾಮಿ ಮಾತನಾಡಿದರು. ಜೆಎಸ್‌ಎಸ್ ಸಂಸ್ಥೆಯ ಐಕ್ಯೂಎಸಿ ಸಂಚಾಲಕಿ ಎಸ್ ಮಮತ, ಪ್ರಾಂಶುಪಾಲ ಡಾ. ಎಸ್. ಕೊಂಗಳಪ್ಪ ಇನ್ನಿತರಿದ್ದರು.

ಉಚಿತ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿ



ಮೈಸೂರು: ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆ ಮತ್ತು ಇಲವಾಲದ ಶ್ರೀ ರಾಮ ವಿದ್ಯಾಕುಲ ಶಾಲೆಯ ಸಹಯೋಗದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಯಶಸ್ವಿಯಾಗಿ ಜರುಗಿತು. ಈ ಶಿಬಿರದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಡಾ.ಟಿ. ಸಂಧ್ಯಾ ಮತ್ತು ಡಾ. ಅರ್ಷಿಯಾ ಅಂಜುಮ್ ಅವರು, ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸಿದರು. ಶಾಲೆಯ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಭಾಗವಹಿಸಿ ಶಿಬಿರದ ಪ್ರಯೋಜನ ಪಡೆದುಕೊಂಡರು. ಶಿಬಿರದಲ್ಲಿ ವಿವಿಧ ಚಿಕಿತ್ಸೆಗಳು ಮತ್ತು ಸೇವೆಗಳು ನೀಡಲಾಯಿತು. ಪ್ರಕೃತಿ ಚಿಕಿತ್ಸಾ ವಿಧಾನಗಳು, ಯೋಗ ಚಿಕಿತ್ಸಾ ಸಲಹೆಗಳು, ಆಹಾರ ನಿಯಮಗಳು (ಡೈಟ್ ಕೌನ್ಸೆಲಿಂಗ್), ಮಡ್ ಥೆರಪಿ, ಅಕ್ಯೂಪಂಕ್ಚರ್‌ಹಾಗೂ ಜೀವನ ಶೈಲಿ ಪರಿವರ್ತನೆ ಕುರಿತ ಮಾರ್ಗದರ್ಶನ ನೀಡಲಾಯಿತು.

ಮತ್ತೆ ಕಾರು-ಟಿಪ್ಪರ್ ಮುಖಾಮುಖಿ ಡಿಕ್ಕಿಗೆ ಮೂವರು ಬಲಿ

ಗುಂಡ್ಲುಪೇಟೆಯ ಮದ್ದಯ್ಯನಹುಂಡಿ ಬಳಿ ದುರ್ಘಟನೆ | ಕೇರಳದ ಮೂವರು ದುರ್ಮರಣ | ಪೊಲೀಸರ ವಿರುದ್ಧ ಆಕ್ರೋಶ

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಇತ್ತೀಚಗೆ ತಾಲೂಕಿನ ಮಲ್ಲಯ್ಯನಪುರ ಗೇಟ್ ಬಳಿ ಟಿಪ್ಪರ್ ಹಾಗೂ ಕಾರು ಡಿಕ್ಕಿ ಹೊಡೆದು ನಾಲ್ವರು ಬಲಿಯಾದ ಘಟನೆ ಮಾಸುವ ಮುನ್ನವೇ, ಕೇರಳಕ್ಕೆ ಅಕ್ರಮವಾಗಿ ಕೆರೆ ಮಣ್ಣು ಸಾಗಿಸುತ್ತಿದ್ದ ಲಾರಿಯೊಂದು ಎದುರು ಬಂದು ಕೇರಳ ಮೂಲದ ಕಾರಿಗೆ ಡಿಕ್ಕಿ ಹೊಡೆದು, ಮೂವರು ಸಾವನ್ನಪ್ಪಿದ ಘಟನೆ ಗುಂಡ್ಲುಪೇಟೆ-ಸುಲ್ತಾನ್ ಬತ್ತೇರಿ ಹೆದ್ದಾರಿಯ ಮದ್ದಯ್ಯನಹುಂಡಿ ಬಳಿ ಭಾನುವಾರ ನಡೆದಿದೆ.

ಕೇರಳ ಮೂಲದ ಕಾರಲ್ಲಿದ್ದ ಮುನಿರಾ (45), ಬಾಲಕ ಮೋಹಿಜ್ (3) ಹಾಗೂ ಕಾರಿನ ಚಾಲಕ ಮುನೀರ್ (30) ಮೃತರು. ಕಾರಿನಲ್ಲಿದ್ದ ಸಾನಿಯಾ ಮಿರ್ಜಾ (22), ಸಾಹಲ್ ಪರ್ವಿನ್ (28), ಬಿಲಾಲ್(34) ಎಂಬುವರಿಗೂ ಪೆಟ್ಟು ಬಿದ್ದಿದೆ. ಗುಂಡ್ಲುಪೇಟೆ ಕಡೆಯಿಂದ ಸುಲ್ತಾನ್ ಬತ್ತೇರಿ ಕಡೆಗೆ ತೆರಳುತ್ತಿದ್ದ ಕೇರಳ ಮೂಲದ ಲಾರಿ ಎದುರು ಬಂದ ಕೇರಳ ಮೂಲದ ಕಾರು ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಕಾರಿನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದೆ. ಅಲ್ಲದೇ ಹೆದ್ದಾರಿ ಬದಿಯ ಹಳ್ಳಕ್ಕೆ ಇಳಿದಿದೆ.

ರೈತರ ಆಕ್ರೋಶ: ಕೆರೆ ಮಣ್ಣು ಸಾಗಿಸುತ್ತಿದ್ದ ಲಾರಿ ಕಾರಿಗೆ ಡಿಕ್ಕಿ ಹೊಡೆದ ರಭಸಕ್ಕೆ ಮೂವರು ಸಾವನ್ನಪ್ಪಿದ್ದ ಘಟನೆ ತಿಳಿಯುತ್ತಿದ್ದಂತೆಯೇ ರೈತ ಸಂಘದ ಕಾರ್ಯಕರ್ತರು ದೌಡಾಯಿಸಿದೆ. ಘಟನೆ ಕಂಡು ತಾಲೂಕು ಆಡಳಿತದ ವಿರುದ್ಧ ಆಕ್ರೋಶ ಹೊರಹಾಕಿದರು. ಟಿಪ್ಪರ್ ಹಾಗೂ ಲಾರಿಗಳ ಮಿತಿ ಮೀರಿದ ವೇಗ ಹಾಗೂ ಅಜಾಗರೂಕತೆಯೇ ರಸ್ತೆ ಅಪಘಾತಕ್ಕೆ ಕಾರಣ ಎಂದು ರೈತರು ಆರೋಪಿಸಿದ್ದು, ಕೇರಳ ರಾಜ್ಯಕ್ಕೆ ಕಲ್ಲು, ಎಂ. ಸ್ಯಾಂಡ್ ಹಾಗೂ ಜಲ್ಲಿ ಜೊತೆಗೆ ಇದೀಗ ಕೆರೆ ಮಣ್ಣು ಸಾಗಿಸುತ್ತಿದ್ದಾರೆ ಎಂದು ದೂರಿದರು.

ಅಪಘಾತ ನಡೆದ ಸ್ಥಳಕ್ಕೆ ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಇತ್ತೀಚೆಗೆ ಪಟ್ಟಣದ ಹೊರ ವಲಯದ ಮಲ್ಲಯ್ಯನಪುರ ಗೇಟ್ ಬಳಿ ಟಿಪ್ಪರ್ ಡಿಕ್ಕಿ ಹೊಡೆದು ಕೇರಳ ಮೂಲದ ಒಂದೇ ಕುಟುಂಬದ ನಾಲ್ವರು ಬಲಿಯಾಗಿದ್ದನ್ನು ಸ್ಮರಿಸಬಹುದಾಗಿದೆ.



ಗುಂಡ್ಲುಪೇಟೆ ತಾಲೂಕಿನ ಮದ್ದಯ್ಯನಹುಂಡಿ ಬಳಿ ಲಾರಿ ಡಿಕ್ಕಿ ಹೊಡೆದು ಕಾರು ಮುಂಭಾಗ ಸಂಪೂರ್ಣ ಜಖಂಗೊಂಡಿದೆ.


ಅಪಘಾತದಿಂದ ಕೆರೆ ಮಣ್ಣು ದಂಧೆ ಬಯಲಿಗೆ!

ಗುಂಡ್ಲುಪೇಟೆ: ಪರ್ಮಿಟ್ ನೆಪದಲ್ಲಿ ನೆರೆ ಕೇರಳ ರಾಜ್ಯಕ್ಕೆ ಎಂ.ಸ್ಯಾಂಡ್, ಜಲ್ಲಿ ಇನ್ನಿತರ ಉಪಖನಿಜವಸ್ತುಗಳು ಸಾಗಾಣಿಕೆ ಆಗುತ್ತಿದ್ದು, ಈ ಸಾಗಾಣಿಕೆಯಲ್ಲಿ ಓವರ್ ಲೋಡ್ ಹಾಗೂ ರಾಜಧನ ವಂಚಿಸುತ್ತಿರುವ ಆರೋಪಗಳ ನಡುವೆ ಇದೀಗ (ಭಾನುವಾರ) ತಾಲೂಕಿನ ಮದ್ದಯ್ಯನಹುಂಡಿ ಬಳಿ ಕದ್ದು ಕೆರೆ ಮಣ್ಣನ್ನು ಕೇರಳ ರಾಜ್ಯಕ್ಕೆ ಪೊಲೀಸರ ಮೂಗಿನಡಿಯೇ ಸಾಗಾಣಿಕೆಯಾಗುತ್ತಿದ್ದ ದಂಧೆ ಬಯಲಿಗೆ ಬಂದಿದೆ.

ಕೇರಳಂಗೆ ಮಿತಿ ಮೀರಿದ ಭಾರ ಹಾಗೂ ಪರ್ಮಿಟ್ ವಂಚಿಸಿ ಅಲ್ಲದೇ ತಾಲೂಕಿನ ಪ್ರಾಕೃತಿಕ ಸಂಪತ್ತು ಲೂಟಿ ಆಗುತ್ತಿರುವ ನಡುವೆ ಕೇರಳ ರಾಜ್ಯಕ್ಕೆ ತಾಲೂಕಿನ ಕೆರೆಗಳ ಉತ್ಕೃಷ್ಟ ಮಣ್ಣು ಕದ್ದು ಹೋಗುತ್ತಿರುವುದು (ಕೆರೆ ಮಣ್ಣು ತುಂಬಿದ ಲಾರಿಗೆ ಟಾರ್ಪಲ್ ಮುಚ್ಚಲಾಗಿದೆ) ಭಾನುವಾರ ಲಾರಿ ಹಾಗೂ ಕಾರು ಅಪಘಾತವಾದ ಬಳಿಕ ದಂಧೆ ಜನರಿಗೆ ಗೊತ್ತಾಗಿದೆ.

ಕೇರಳಕ್ಕೆ ಹೋಗುವ ಮಾರ್ಗಮಧ್ಯೆ ಮದ್ದೂರು ಹಾಗೂ ಮೂಲೆಹೊಳೆ ಬಳಿ ತಪಾಸಣಾ ಕೇಂದ್ರಗಳಿವೆ. ಪೊಲೀಸರ ಸಹಕಾರವಿಲ್ಲದೆ ಕೆರೆ ಮಣ್ಣಿನ ದಂಧೆ ನಡೆಯಲು ಸಾಧ್ಯವೇ ಇಲ್ಲ. ಸ್ಥಳೀಯ ಪೊಲೀಸರು ಟಿಪ್ಪರ್‌ನಲ್ಲಿ ಕೆರೆ ಮಣ್ಣು ಹೋದರೆ ಅನುಮಾನ ಬರುತ್ತದೆ ಎಂದು ಲಾರಿ ಮೂಲಕ ಟಾರ್ಪಲ್ ಹಾಕಿ ಕಳುಹಿಸುತ್ತಿದ್ದಾರೆ ಎಂದು ರೈತರು ಆರೋಪಿಸಿದ್ದಾರೆ.

ಸ್ಥಳೀಯ ಪೊಲೀಸರ ಸಹಕಾರವಿಲ್ಲದೆ ಚೆಕ್ ಪೋಸ್ಟ್‌ನಲ್ಲಿ ಪಡಿತರ ಅಕ್ಕಿ, ಕಲ್ಲು, ಮಣ್ಣು, ಕಾಳುಮೆಣಸು, ಜಾನುವಾರುಗಳು ಹೋಗಲು ಸಾಧ್ಯವಿಲ್ಲ. ಈ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಗಮನ ಹರಿಸಬೇಕಿದೆ ಮುಂದೆ ಏನು ಮಾಡುವರೋ ಎಂದು ಕಾದು ನೋಡಬೇಕಿದೆ ಎಂದು ರೈತಸಂಘ ಹೇಳಿದೆ.



ಗುಂಡ್ಲುಪೇಟೆ-ಸುಲ್ತಾನ್ ಬತ್ತೇರಿ ಹೆದ್ದಾರಿಯ ಮದ್ದಯ್ಯನಹುಂಡಿ ಬಳಿ ಕೇರಳಕ್ಕೆ ಸಾಗಿಸುತ್ತಿದ್ದ ಲಾರಿಯಲ್ಲಿ ಕೆರೆಯ ಮಣ್ಣು.

ಶರಣರ ಬದುಕು ನಿಮ್ಮ ಜೀವನದ ಕೈಗನ್ನಡಿಯಾಗಲಿ: ಪ್ರಭುಸ್ವಾಮಿ

ಶರಣ ತತ್ವಾಮೃತ ಸಿಂಚನ ಕಾರ್ಯಕ್ರಮದಲ್ಲಿ ಜೆಎಸ್‌ಎಸ್ ಕಾಲೇಜು ಸಹ ಪ್ರಾಧ್ಯಾಪಕ ನುಡಿ

• **ಕನ್ನಡಪ್ರಭ ವಾರ್ತೆ** ಯಳಂದೂರು

12ನೇ ಶತಮಾನದಲ್ಲಿ ಬಾಳಿ ಬದುಕಿನ ಶರಣರ ಬದುಕು, ಇವರ ತತ್ವಾದರ್ಶಗಳು ಇಂದಿಗೆ ನಮ್ಮ ಬದುಕಿನ ಕೈಗನ್ನಡಿಯಾಗಬೇಕು ಎಂದು ಮೈಸೂರು ಜೆಎಸ್‌ಎಸ್ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಬಿ. ಪ್ರಭುಸ್ವಾಮಿ ಕರೆ ನೀಡಿದರು.

ಶುಕ್ರವಾರ ಸಂಜೆ ತಾಲೂಕಿನ ಕಟ್ನವಾಡಿ ಗ್ರಾಮದಲ್ಲಿ ವೀರಶೈವ ಲಿಂಗಾಯತ ನೌಕರರ ಕ್ಷೇಮಾಭಿವೃದ್ಧ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ಶರಣತತ್ವಾಮೃತ ಸಿಂಚನ ಕಾರ್ಯಕ್ರಮ 12ನೇ ಮಾಲಿಕೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

12ನೇ ಶತಮಾನದ ಬಸವಣ್ಣ, ಅಕ್ಕ ಮಹಾದೇವಿ, ಆಯ್ದಕ್ಕಿ ಮಾರಯ್ಯ-ಲಕ್ಕಮ್ಮ, ದೇವರದಾಸೀಮಯ್ಯ, ಮಾದಾರ ಚನ್ನಯ್ಯ ಸೇರಿದಂತೆ ಸಾವಿರಾರು ಶರಣರು ತಾವು ಪ್ರಾಮಾಣಿಕವಾಗಿ ಸೇವೆ ಮಾಡಿ, ನಿಷ್ಠೆಯ ಮೂಲಕ ಬದುಕು ಸಾಗಿಸಿದ ಮಹನೀಯರಾಗಿದ್ದಾರೆ. ಕಾಯಕ ನಿಷ್ಠೆಯ ಜೊತೆಗೆ ಸಮಾಜವನ್ನು ತಿದ್ದುವ ಇವರ ಪ್ರಾಮಾಣಿಕ ಪ್ರಯತ್ನ ಅವಿಸ್ಮರಣೀಯ. ಇವರ ಬದುಕನ್ನು ನಾವು ಅಭ್ಯಸಿಸಿ ಈ ದಿಕ್ಕಿನಲ್ಲೇ ನಡೆದರೆ ಇಂದಿನ ಪೀಳಿಗೆಗೆ ಇದು ಮಹಾನ್ ಹಾದಿಯಾಗಲಿದೆ. ಸದಾ ಕಲುಷಿತವಾಗಿರುವ ನಮ್ಮ ಬದುಕು, ಸಮಾಜವನ್ನು ಹಸನುಗೊಳಿಸುವ ಕೆಲಸವನ್ನು ನಾವು ಮಾಡಬಹುದು ಈ ದಿಕ್ಕಿನಲ್ಲಿ ಎಲ್ಲರೂ ಯೋಚಿಸುವಂತಾಗಬೇಕು ಎಂದು ಸಲಹೆ ನೀಡಿದರು.

ಕುಂತೂರು ವೀರಸಿಂಹಾಸನ ಮಠಾಧ್ಯಕ್ಷ ಶ್ರೀ ಶಿವಪ್ರಭುಸ್ವಾಮಿಜಿ ಮಾತನಾಡಿ, ಶರಣರು ಹಾಕಿಕೊಟ್ಟ ಮಾರ್ಗ ನಮಗೆ ಆದರ್ಶವಾಗಬೇಕು. ಪ್ರಸ್ತುತ ಸಮಾಜದಲ್ಲಿ ಶಾಂತಿ, ನೆಮ್ಮದಿ, ತೃಪ್ತಿಕರ ಜೀವನ ಕನಸಾಗಿಯೇ ಉಳಿದಿದೆ. ಇದು ಕೆಲವರ ಪಾಲಾಗಿದೆ. ನಮ್ಮ ಜೀವನವನ್ನು ಉನ್ನತೀಕರಿಸಿಕೊಳ್ಳಲು ನಾವು ಶರಣರ ವಚನಗಳ ಸಾರ, ಇವರ ಜೀವನವನ್ನು ಅಭ್ಯಸಿಸಬೇಕು. ಆ ಮಾರ್ಗದಲ್ಲಿ ನಡೆಯಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ತಾಲೂಕು ವೀರಶೈವ ಲಿಂಗಾಯಿತ ನೌಕರರ ಸಂಘದ ಅಧ್ಯಕ್ಷ ಬಿ.ನಂಜುಂಡಸ್ವಾಮಿ ಮಾತನಾಡಿ, ತಾಲೂಕಿನ ಸಮಾಜದ ಎಸ್‌ಎಸ್‌ಎಲ್‌ಸಿ, ಪಿಯುಸಿಯಲ್ಲಿ ಶೇ.85ಕ್ಕಿಂತ ಹೆಚ್ಚು ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಗುವುದು. ಇದಕ್ಕಾಗಿ ಎಲ್ಲಾ ಸಿದ್ದತೆಗಳನ್ನು ಮಾಡಿಕೊಳ್ಳಗಿದೆ. ಇದರೊಂದಿಗೆ ನಿವೃತ್ತ ನೌಕರರನ್ನೂ ಸನ್ಮಾನಿಸುವ ಯೋಜನೆಯನ್ನು ರೂಪಿಸಿಕೊಳ್ಳಲಾಗಿದ್ದು ಆನಿಟ್ಟಿನಲ್ಲಿ ಸಂಘ ಕಾರ್ಯಪ್ರವೃತ್ತವಾಗಿದೆ ಎಂದು ಮಾಹಿತಿ ನೀಡಿದರು.

ಬಸವಶ್ರೀ ಪತ್ತಿನ ಸಂಘದ ಅಧ್ಯಕ್ಷ ಗುರುಸಿದ್ದಪ್ಪ ಮಾತನಾಡಿದರು. ಬಸವ ಬಳಗದ ಜಿಲ್ಲಾಧ್ಯಕ್ಷ ಎನ್ರಿಚ್ ಮಹದೇವಸ್ವಾಮಿ, ಶಿಕ್ಷಕರಾದ ಮಹದೇವಸ್ವಾಮಿ, ಪಿ. ಮಹದೇವಪ್ಪ, ಶಿವಕುಮಾರ್, ಮಹದೇವಪ್ಪ, ಮಲ್ಲಣ್ಣ, ಶಿವಕುಮಾರಸ್ವಾಮಿ, ಲೋಕೇಶ ಮೂರ್ತಿ, ರವಿ, ಮಲ್ಲಪ್ಪ, ವೀರಣ್ಣ, ಸಿ. ಮಹದೇವು ಸೇರಿದಂತೆ ಅನೇಕರು ಇದ್ದರು.



ಯಳಂದೂರು ತಾಲೂಕಿನ ಕಟ್ನವಾಡಿ ಗ್ರಾಮದಲ್ಲಿ ಶುಕ್ರವಾರ ಸಂಜೆ ನಡೆದ ಶರಣ ತತ್ವಾಮೃತ ಸಿಂಚನ ಕಾರ್ಯಕ್ರಮವನ್ನು ಕುಂತೂರು ವೀರಸಿಂಹಾಸನ ಮಠಾಧ್ಯಕ್ಷರಾದ ಶ್ರೀ ಶಿವಪ್ರಭು ಸ್ವಾಮಿಜಿ ಉದ್ಘಾಟಿಸಿದರು.

ಕ್ರೀಡೆ ಮಕ್ಕಳ ದೈಹಿಕ, ಮಾನಸಿಕ ಆರೋಗ್ಯಕ್ಕೆ ಪೂರಕ: ಮಲ್ಲನಾಯಕ



ಗುಂಡ್ಲುಪೇಟೆ ಡಿ.ದೇವರಾಜ ಅರಸು ಕ್ರೀಡಾಂಗಣದಲ್ಲಿ ಕ್ರೀಡಾ ಶಿಬಿರ ಸಮಾರೋಪ ನಡೆಯಿತು.

• **ಕನ್ನಡಪ್ರಭ ವಾರ್ತೆ** ಗುಂಡ್ಲುಪೇಟೆ

ಕ್ರೀಡೆ ಮಕ್ಕಳ ದೈಹಿಕ ಮತ್ತು ಮಾನಸಿಕ ಆರೋಗ್ಯದ ಬೆಳವಣಿಗೆಗೆ ಪೂರಕ ಎಂದು ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಮಲ್ಲನಾಯಕ ಹೇಳಿದರು.

ಪಟ್ಟಣದ ಡಿ.ದೇವರಾಜ ಅರಸ್ ಕ್ರೀಡಾಂಗಣದಲ್ಲಿ ಧ್ಯಾನ್ ಚಂದ್ ಸ್ಪೋರ್ಟ್ಸ್ ಅಸೋಸಿಯೇಷನ್ ಏರ್ಪಡಿಸಿದ್ದ 5ನೇ ವಾರ್ಷಿಕೋತ್ಸವದ ಕ್ರೀಡಾ ಶಿಬಿರ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಬೇಸಿಗೆ ಶಿಬಿರ: ಒಂದು ತಿಂಗಳುಗಳ ಕಾಲ ಯಶಸ್ವಿಯಾಗಿ ನಡೆದ ಶಿಬಿರದಲ್ಲಿ ಅಥ್ಲೆಟಿಕ್ಸ್, ಪುಟ್ ಬಾಲ್, ರಗ್ಬಿ, ಯೋಗ, ಧ್ಯಾನ, ಪ್ರಾಣಾಯಾಮ, ಮನರಂಜನೆ ಕ್ರೀಡೆ, ಒಂದು ದಿನದ ಚಾರಣದಂತ ಹಲವು ಕಾರ್ಯಕ್ರಮ ನಡೆದವು.

ಕಾರ್ಯಕ್ರಮದಲ್ಲಿ ಪ್ರತಾಪ್, ಕುಮಾರ್, ರಂಗಸ್ವಾಮಿ ಮಕ್ಕಳಿಗೆ ಬಹುಮಾನ ವಿತರಿಸಿ ಶುಭ ಕೋರಿದರು. ಧ್ಯಾನ್ ಚಂದ್ ಸ್ಪೋರ್ಟ್ಸ್ ಅಸೋಸಿಯೇಷನ್ ಪದಾಧಿಕಾರಿ ದೊಡ್ಡಪ್ಪಾಜಿ, ನಾಗರಾಜು, ನಾಗೇಂದ್ರ, ಭರತ್ ಕುಮಾರ್, ಭವಾನಿ ಹಾಗೂ 100ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ಪೋಷಕರು ಹಾಜರಿದ್ದರು.

ಗುಂಡ್ಲುಪೇಟೆ ಶಿಕ್ಷಕರಿಂದ ಶಾಸಕರಿಗೆ ಸನ್ಮಾನ

ಗುಂಡ್ಲುಪೇಟೆ ತಾಲೂಕು ಪ್ರಾಥಮಿಕ ಶಿಕ್ಷಕರ ಸಂಘದ ಚುನಾವಣೆಯಲ್ಲಿ ಗೆಲುವು ಸಾಧಿಸಿದ 7 ಮಂದಿ ವಿಜೇತರು ಶಾಸಕ ಎಚ್.ಎಂ. ಗಣೇಶ್ ಪ್ರಸಾದ್‌ಗೆ ಸನ್ಮಾನಿಸಿ ಅಭಿನಂದಿಸಿದರು.



766 ಕೆಜಿ ಅಕ್ಕಿ ವಶ, ಆರೋಪಿ ಸೆರೆ



ಕೊಳ್ಳೇಗಾಲ ತಾಲೂಕಿನ ಸಿಲ್ಕಲ್ ಪುರದಲ್ಲಿ ಅಕ್ರಮ ಅಕ್ಕಿ ದಾಸ್ತಾನು ವಶಕ್ಕೆ ಪಡೆದ ಪೊಲೀಸರು ಹಾಗೂ ಆಹಾರ ಇಲಾಖಾಧಿಕಾರಿಗಳು ಆರೋಪಿ ಜೊತೆ ಇದ್ದಾರೆ.

ಕೊಳ್ಳೇಗಾಲ: ತಾಲೂಕಿನ ಸಿಲ್ಕಲ್‌ಪುರ ಗ್ರಾಮದಲ್ಲಿ ಅಕ್ರಮವಾಗಿ ಪಡಿತರ ಅಕ್ಕಿಯನ್ನು ಸಂಗ್ರಹಿಸಿಟ್ಟಿದ್ದ ಕುರಿತು ಖಚಿತ ಮಾಹಿತಿ ಮೇರೆಗೆ ಪೊಲೀಸರು ಇಲಾಖೆ ಹಾಗೂ ಆಹಾರ ಇಲಾಖೆಯವರು ಜಂಟಿ ದಾಳಿ ನಡೆಸಿ ಆರೋಪಿಯೋರ್ವನನ್ನು ಬಂಧಿಸಿ 766 ಕೆಜಿ ಅಕ್ಕಿ ವಶಪಡಿಸಿಕೊಂಡಿದ್ದಾರೆ. ಸಿಲ್ಕಲ್‌ಪುರ ಗ್ರಾಮದ ಮಹದೇವಯ್ಯ (70) ಎಂಬಾತ ಬಂಧಿತ ಆರೋಪಿ. ಈತ ಸುತ್ತಮುತ್ತಲಿನ ಗ್ರಾಮಗಳಲ್ಲಿ ಪಡಿತರ ಅಕ್ಕಿಯನ್ನು ಖರೀದಿ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಸಲುವಾಗಿ ಮನೆಯ ಮುಂದೆ ಸಂಗ್ರಹಿಸಿಟ್ಟಿದ್ದ. ಈ ಹಿನ್ನೆಲೆ ಮಾಂಬಳ್ಳಿ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದೆ.

ಕೊಳ್ಳೇಗಾಲ ಬಳಿ 2 ಮನೆಗೆ ಬೆಂಕಿ: ಲಕ್ಷಾಂತರ ರು. ನಷ್ಟ, ಅನಾಹುತವಿಲ್ಲ

ಸತ್ತೇಗಾಲದ ಜಾಗೇರಿಯಲ್ಲಿ ನಡೆದ ಪ್ರತ್ಯೇಕ ಘಟನೆ

ಕೊಳ್ಳೇಗಾಲ: ತಾಲೂಕಿನ ಸತ್ತೇಗಾಲ ಜಾಗೇರಿಯಲ್ಲಿ ಪ್ರತ್ಯೇಕವಾಗಿ ಎರಡು ಮನೆಗಳಿಗೆ ಆಕಸ್ಮಿಕವಾಗಿ ಬೆಂಕಿ ಹರಡಿದ ಪರಿಣಾಮ ಎರಡು ಮನೆಗಳು ಸುಟ್ಟುಹೋಗಿರುವ ಘಟನೆ ನಡೆದಿದೆ. ಜಾಗೇರಿಯ ಸಿ.ಆರ್. ನಗರ ವಾಸಿ ಚಿನ್ನರಾಜು ಹಾಗೂ ಪಾಸ್ಕಲ್‌ನಗರ ವಾಸಿ ದಯಾಲಮೇರಿ ಎಂಬುವರ ಮನೆ ಆಕಸ್ಮಿಕವಾಗಿ ಬೆಂಕಿ ಹೊತ್ತುಕೊಂಡು ಎರಡು ಮನೆಯಲ್ಲಿದ್ದ ಟಿ.ವಿ, ಫ್ರಿಡ್ಜ್, ಫ್ಯಾನ್ ಮನೆಯ ಶೀಟ್‌ಗಳು ಹಾಗೂ ಅಗತ್ಯ ದಾಖಲೆಗಳು ಸುಟ್ಟುಹೋಗಿದ್ದು ಇದರಿಂದಾಗಿ ಲಕ್ಷಾಂತರ ನಷ್ಟ ಸಂಭವಿಸಿದ್ದು, ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಸಿದ್ಧತೆ | ಚಾ.ನಗರ ವಿವಿಯ ಪ್ರಾಂಶುಪಾಲರು, ಅಧಿಕಾರಿಗಳೊಂದಿಗೆ ಸಭೆ

ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಜಿಲ್ಲಾ ಮುನ್ನಡೆ ಕಾರ್ಯಕ್ರಮ: ಡೀಸಿ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಜಿಲ್ಲಾ ಮುನ್ನಡೆ ಕಾರ್ಯಕ್ರಮ ಆರಂಭಿಸುವ ಕುರಿತು ಜಿಲ್ಲಾಧಿಕಾರಿ ಶ್ರೀರೂಪ ಅವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು.



ಚಾಮರಾಜನಗರ ವಿಶ್ವವಿದ್ಯಾಲಯದ ವ್ಯಾಪ್ತಿಗೆ ಒಳಪಡುವ ಪದವಿ ಹಾಗೂ ಸ್ನಾತಕೋತ್ತರ ಕಾಲೇಜುಗಳ ಪ್ರಾಂಶುಪಾಲರು, ಅಧಿಕಾರಿಗಳೊಂದಿಗೆ ಚರ್ಚಿಸಲಾಯಿತು.

ಕಾರ್ಯಕ್ರಮವನ್ನು ಪದವಿ ವಿದ್ಯಾರ್ಥಿಗಳು ಹಾಗೂ ಈಗಾಗಲೇ ವ್ಯಾಸಂಗ ಪೂರ್ಣಗೊಳಿಸಿದ ಅಭ್ಯರ್ಥಿಗಳಿಗೆ ಸಹಕಾರಿಯಾಗುವಂತೆ ರೂಪಿಸುವ ಕುರಿತು ಸಮಾಲೋಚಿಸಲಾಯಿತು. ಪದವಿ ಅವಧಿಯಲ್ಲಿಯೇ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ತಿಳಿವಳಿಕೆ, ಮಾರ್ಗದರ್ಶನ ಮತ್ತು ಪರಿಚಯ ಮಾಡಿಕೊಟ್ಟು ಅವರನ್ನು ಸ್ಪರ್ಧಾತ್ಮಕ ಪರೀಕ್ಷೆಗೆ ಸಜ್ಜುಗೊಳಿಸುವುದು ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿದೆ. ಈ ಕಾರ್ಯಕ್ರಮವನ್ನು ಇಂಡಿಯಾ ಫೋರ್‌ಐಎಎಸ್ ಸಂಸ್ಥೆಯ ಸಹಯೋಗದಲ್ಲಿ ಜಾರಿಗೊಳಿಸಲು ಉದ್ದೇಶಿಸಲಾಗಿದೆ.

ಕಾರ್ಯಕ್ರಮದ ಜಾರಿಗೆ ಸಂಬಂಧಿಸಿದ ರೂಪುರೇಷೆ ಮತ್ತು ಹೆಚ್ಚಿನ ವಿದ್ಯಾರ್ಥಿಗಳು ಭಾಗವಹಿಸುವಿಕೆ ಕುರಿತು ಚರ್ಚಿಸಲಾಯಿತು. ಜಿಲ್ಲಾ ಸಿ.ಎಸ್.ಆರ್‌ಸಂಯೋಜಕರೊಂದಿಗೆ ಇಂಡಿಯಾ ಫೋರ್‌ಐಎಎಸ್ ಸಂಸ್ಥೆಯ ಪ್ರತಿನಿಧಿಗಳು, ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಅಡಿಗಲ್ಲು | ಹನೂರಿನ ಶಾಗ್ಯ ಗ್ರಾಮದಲ್ಲಿ ನೂತನ ವಾಲ್ಮೀಕ ಭವನ

ಶಾಗ್ಯದಲ್ಲಿ ವಾಲ್ಮೀಕಿ ಭವನ ಕೆಲಸಕ್ಕೆ ಶಾಸಕ ಮಂಜುನಾಥ್ ಶಂಕುಸ್ಥಾಪನೆ

• **ಕನ್ನಡಪ್ರಭ ವಾರ್ತೆ** ಹನೂರು

ತಾಲೂಕಿನ ಶಾಗ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಳ್ಳಿದೊಡ್ಡಿ ಗ್ರಾಮದ ವಾಲ್ಮೀಕಿ ಸಮುದಾಯ ಭವನಕ್ಕೆ ಶಾಸಕರ ವಿಶೇಷ ಅನುದಾನದ ₹25 ಲಕ್ಷ ವೆಚ್ಚದ ಕಾಮಗಾರಿಗೆ ಶಾಸಕ ಎಂ.ಆರ್. ಮಂಜುನಾಥ್ ಅವರು ಚಾಲನೆ ನೀಡಿದರು.

ಗ್ರಾಮದಲ್ಲಿ ಸಮುದಾಯ ಭವನ ನಿರ್ಮಾಣ ಮಾಡುವಂತೆ ಹಲವು ದಶಕಗಳ ಬೇಡಿಕೆಯಾಗಿತ್ತು. ಗ್ರಾಮಸ್ಥರ ಆಶಯದಂತೆ ವಾಲ್ಮೀಕಿ ಸಮುದಾಯ ಭವನಕ್ಕೆ ಭೂಮಿ ಪೂಜೆ ನೆರವೇರಿಸಲಾಗಿದೆ, ಮುಂದಿನ ವರ್ಷದೊಳಗೆ ಸುಸಜ್ಜಿತವಾದ ಕಟ್ಟಡದೊಂದಿಗೆ ಗ್ರಾಮಗಳಲ್ಲಿ ನಡೆಯುವ ಶುಭ ಸಮಾರಂಭಗಳಿಗೆ ಇನ್ನಿತರ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಕೂಲ ಆಗಲಿ ಎಂದು ಶುಭ ಹಾರೈಸಿದರು.



ಓವರ್‌ಹೆಡ್ ಟ್ಯಾಂಕ್ ನಿರ್ಮಾಣಕ್ಕೆ ಅಸ್ತು: ಕಳ್ಳಿ ದೊಡ್ಡಿ ಗ್ರಾಮಸ್ಥರ ಅನುಕೂಲಕ್ಕಾಗಿ ಗ್ರಾಮದಲ್ಲಿ ಓವರ್ ಹೆಡ್ ಟ್ಯಾಂಕ್ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳಲಾಗುವುದು ಜೊತೆಗೆ ಗ್ರಾಮದಲ್ಲಿ ಆಗಬೇಕಾಗಿರುವ ಕೆಲಸ ಕಾರ್ಯಗಳಿಗೆ ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳಲಾಗುವುದು, ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಹೆಚ್ಚಿನ ಒತ್ತು ನೀಡಲಾಗುವುದು ಎಂದು ತಿಳಿಸಿದರು. ಮುಖಂಡರಾದ ಜಯಕುಮಾರ್, ಅನಿಲ್‌ಕುಮಾರ್, ಡಿ.ಕೆ. ರಾಜು ಗ್ರಾಮಸ್ಥರು ಉಪಸ್ಥಿತರಿದ್ದರು.

ಸುದ್ದಿ ಸಿಂಚನ

ಹಿಂ.ವರ್ಗದ ಅಭ್ಯರ್ಥಿಗಳಿಗೆ ಉಚಿತ ವೃತ್ತಿ ಮಾರ್ಗದರ್ಶನ, ತರಬೇತಿ ಅರ್ಜಿಅವಧಿ ವಿಸ್ತರಣೆ

ಚಾಮರಾಜನಗರ: ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಭಾರತೀಯ ಸೇನೆ, ಇತರೆ ಯೂನಿಫಾರ್ಮ್ ಸೇವೆಗಳಿಗೆ ಸೇರ ಬಯಸುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2(ಎ), 3(ಎ) ಹಾಗೂ 3(ಬಿ) ಅರ್ಹ ಅಭ್ಯರ್ಥಿಗಳಿಗೆ ಆಯ್ಕೆಯ ಪೂರ್ವ ಸಿದ್ಧತೆ ಬಗ್ಗೆ ವೃತ್ತಿ ಮಾರ್ಗದರ್ಶನ ಹಾಗೂ ತರಬೇತಿಯನ್ನು ಉಚಿತವಾಗಿ ನೀಡುತ್ತಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಮೇ 13ರವರೆಗೆ ವಿಸ್ತರಿಸಲಾಗಿದೆ. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಡುಪಿ ಜಿಲ್ಲೆ ವತಿಯಿಂದ 2026-27ನೇ ಸಾಲಿನಲ್ಲಿ ವೃತ್ತಿ ಮಾರ್ಗದರ್ಶನ ತರಬೇತಿ ನೀಡಲಾಗುತ್ತಿದೆ. ಅಭ್ಯರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ಗೆ ಸೇರಿರಬೇಕು. ಅಭ್ಯರ್ಥಿ ಮತ್ತು ಕುಟುಂಬದ ಒಟ್ಟು ವಾರ್ಷಿಕ ಆದಾಯ ಪ್ರವರ್ಗ-1ಕ್ಕೆ 2.50 ಲಕ್ಷ ರು. ಹಾಗೂ ಪ್ರವರ್ಗ 2(ಎ), 3(ಎ) ಮತ್ತು 3(ಬಿ)ಗಳಿಗೆ 1 ಲಕ್ಷ ರು. ಮಿತಿಯಲ್ಲಿರಬೇಕು. ಅಭ್ಯರ್ಥಿಯು 10ನೇ ತರಗತಿ ಉತ್ತೀರ್ಣವಾಗಿದ್ದು, ಪ್ರತಿ ವಿಷಯದಲ್ಲಿ ಕನಿಷ್ಠ 33 ಅಂಕಗಳು ಮತ್ತು ಸರಾಸರಿ ಶೇ.45ರಷ್ಟು ಅಂಕಗಳನ್ನು ಪಡೆದಿರಬೇಕು. ಗ್ರೇಡಿಂಗ್ ಸಿಸ್ಟಮ್ ಇದ್ದಲ್ಲಿ ಸಮಾನವಾದ ಗ್ರೇಡ್ ಪಡೆದಿರಬೇಕು. ತರಬೇತಿಯನ್ನು ಉಡುಪಿ ಜಿಲ್ಲೆಯ ಬ್ರಹ್ಮಾವರ ತಾಲ್ಲೂಕಿನ ಹನೆಹಳ್ಳಿ ಬಾರ್ಕೂರಿನ ನ್ಯಾಷನಲ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನೀಡಲಾಗುತ್ತದೆ. ತರಬೇತಿ ಅವಧಿಯು ಒಟ್ಟು 4 ತಿಂಗಳುಗಳದ್ದಾಗಿದ್ದು, ಉಚಿತ ವಸತಿ ಮತ್ತು ಊಟದ ಸೌಲಭ್ಯ ನೀಡಲಾಗುವುದು. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಯನ್ನು ಆಯಾ ಜಿಲ್ಲಾ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಪಡೆದು ಭರ್ತಿ ಮಾಡಿ ಖುದ್ದಾಗಿ ಅಥವಾ ಅಂಚೆಯ ಮೂಲಕ ಸಲ್ಲಿಸಬಹುದು ಅಥವಾ ವೆಬ್ ಸೈಟ್ https://udupi.nic.in ರಿಂದ ಅರ್ಜಿಯನ್ನು ಡೌನ್‌ಲೋಡ್ ಮಾಡಿಕೊಂಡು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಕೊಠಡಿ ಸಂಖ್ಯೆ 304, ಬಿ-ಬ್ಲಾಕ್, 2ನೇ ಮಹಡಿ, ರಜತಾದ್ರಿ, ಮಣಿಪಾಲ- 576104, ಉಡುಪಿ ಜಿಲ್ಲೆ (ದೂ.ಸಂ 0820-2574881) ವಿಳಾಸಕ್ಕೆ ಕಳುಹಿಸಬೇಕು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗುಂಡ್ಲುಪೇಟೆ ಬಸ್ ನಿಲ್ದಾಣದಲ್ಲಿ ಸರಗಳ್ಳತನ

ಗುಂಡ್ಲುಪೇಟೆ: ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಹಾಡಹಗಲೇ ಮಹಿಳೆಯೊಬ್ಬರ ಚಿನ್ನದ ಸರವನ್ನು ಅಪಹರಣಗೊಂಡ ಘಟನೆ ನಡೆದಿದೆ. ತಾಲೂಕಿನ ಹಳ್ಳದ ಮಾದಹಳ್ಳಿ ಗ್ರಾಮದ ನಿವಾಸಿ ಗೌರಿ ಬಾಯಿ ಸುಮಾರು 35 ಗ್ರಾಂ ಚಿನ್ನದ ಸರ ಕಳೆದಕೊಂಡವರಾಗಿದ್ದಾರೆ. ಪಟ್ಟಣದ ಕೆಎಸ್‌ಆರ್‌ಟಿಸಿ ನಿಲ್ದಾಣದಲ್ಲಿ ತೆರಕಣಾಂಬಿ ಹೋಗಲು ಬಸ್ ತೆರಳಲು ಕುಳಿತ ಸಮಯದಲ್ಲಿ ಬಂದ ಯುವಕ ಕಿತ್ತುಕೊಂಡ ಪರಾರಿಯಾಗಿದ್ದಾನೆ.

ಸಿಸಿಟೀವಿ ದುರಸ್ತಿ: ಪ್ರತಿ ನಿತ್ಯ ಸಾವಿರಾರು ಜನ ಬಂದು ಹೋಗುವ ಜಾಗದಲ್ಲಿ ಸಿಸಿ ಕ್ಯಾಮೆರಾ ಕೆಟ್ಟಿರುವ ಕಾರಣ ಸರಗಳ್ಳತನ ಮಾಡಿದ ಆರೋಪಿ ಪತ್ತೆ ಪೊಲೀಸರಿಗೆ ತಲೆ ನೋವಾಗಿ ಪರಿಣಮಿಸಲಿದೆ. ಹಾಡಹಗಲೇ ಪಟ್ಟಣದಲ್ಲಿ ಸರಗಳ್ಳತನ ನಡೆದಿರುವುದು ನಾಗರೀಕರಲ್ಲಿ ಆತಂಕಕ್ಕೀಡಾಗಿದ್ದಾರೆ. ಸ್ಥಳೀಯ ಪೊಲೀಸರು ಪಟ್ಟಣದ ಪ್ರಮುಖ ವೃತ್ತಗಳಲ್ಲಿ ನಿಲ್ಲುತ್ತಿಲ್ಲ. ಜೊತೆಗೆ ಹೈ ಪ್ಯಾಟ್ರೋಲ್ ವಾಹನ ಗಸ್ತು ಮಾಡುತ್ತಿಲ್ಲ. ಪೊಲೀಸ್ ಅಧಿಕಾರಿಗಳು ಬಳಸಿಕೊಳ್ಳುತ್ತಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಹೈ ಪ್ಯಾಟ್ರೋಲ್ ವಾಹನ ಗಸ್ತು ಮಾಡುವ ಬದಲು ಪೊಲೀಸ್ ಅಧಿಕಾರಿಗಳ ಮನೆಗೆ ಹಾಗೂ ಇನ್ನಿತರ ಕೇಸುಗಳ ತೆರಳುತ್ತಿದೆ ಇದರ ಬಗ್ಗೆ ಎಸ್ಪಿ ಗಮನಹರಿಸಬೇಕಿದೆ.

ಚಾಮರಾಜನಗರ ವಿವಿಧೆಡೆ ಜನರ ಜತೆ ಶಾಸಕರ ಮಾತು

ಚಾಮರಾಜನಗರ: ಸೋಮವಾರಪೇಟೆ, ಗಾಳೀಪುರ ಬಡಾವಣೆಗಳಲ್ಲಿ ನೀರಿನ ಸಮಸ್ಯೆಯನ್ನು ಪರಿಹರಿಸುವಂತೆ ಒತ್ತಾಯಿಸಿ, ಸ್ಥಳೀಯ ನಿವಾಸಿಗಳ ಮನವಿಯ ಹಿನ್ನೆಲೆಯಲ್ಲಿ 2ನೇ ವಾರ್ಡಿನಲ್ಲಿ ಕುಡಿಯುವ ನೀರಿಗೆ ಪಾಯಿಂಟ್ ಮಾಡಿಸಿದ ಜಾಗದಲ್ಲಿ ಕೊಳವೆಬಾವಿ ಕೊರೆ ಯುವ ಕಾರ್ಯ ಆರಂಭವಾಗಿದ್ದು, ಖುದ್ದು ವಾರ್ಡಿಗೆ ಶಾಸಕ ಸಿ. ಪುಟ್ಟರಂಗಶೆಟ್ಟಿ ಅವರು ಸ್ಥಳಕ್ಕೆ ತೆರಳಿ ವೀಕ್ಷಿಸಿದರು. ಬಳಿಕ ಮಾತನಾಡಿ, ಬೇಸಿಗೆ ಆರಂಭವಾಗಿದ್ದು, ಅಂತರ್ಜಲ ಕುಸಿತದ ಹಿನ್ನೆಲೆ ಕುಡಿಯುವ ನೀರಿನ ಸಮಸ್ಯೆ ಎದುರಾಗಿದ್ದು, ಜನಸಾಮಾನ್ಯರಿಗೆ ತೊಂದರೆಯಾಗಿದೆ. ನೀರು ಸಿಗುವ ಕಡೆ ತುರ್ತಾಗಿ ಕೊಳವೆಬಾವಿ ಕೊರೆಸಿ, ಪೈಪ್ ಲೈನ್ ಕಾಮಗಾರಿ ಕೈಗೊಂಡು, ಜನರಿಗೆ ನೀರು ಕೊಡಬೇಕು. ಇದರ ಜೊತೆಗೆ ಹಳೇ ಕೊಳವೆ ಬಾವಿಗಳನ್ನು ಪುನಶ್ಚೇತನ ಗೊಳಿಸಿ, ನೀರುಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಚೂಡಾ ಮಾಜಿ ಅಧ್ಯಕ್ಷ ಸೈಯದ್‌ರಫೀ, ಬಡಾವಣೆಯ ಮುಖಂಡರು ನಿವಾಸಿಗಳು ಹಾಜರಿದ್ದರು.

ಜಿಟಿಟಿಸಿ ಸದುಪಯೋಗಪಡಿಸಿಕೊಳ್ಳಿ: ವಿನಯ್

ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರಿಂದ ಕರೆ | ಯೋಜನೆ, ಸೌಲಭ್ಯದ ಲಾಭ ಪಡೆದುಕೊಳ್ಳುವಂತೆ ಮನವಿ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆ ಸಹಯೋಗದೊಂದಿಗೆ ಕಾರ್ಯನಿರ್ವಹಿಸುತ್ತಿರುವ ಗುಂಡ್ಲುಪೇಟೆಯ ದುಂದಾಸನಪುರದಲ್ಲಿರು ಸರ್ಕಾರಿ ಉಪಕರಣಾಗಾರ ಮತ್ತ ತರಬೇತಿ ಕೇಂದ್ರವು ಒಂದು ವಿಶ್ವದರ್ಜೆಯ ತಾಂತ್ರಿಕ ಶಿಕ್ಷಣವನ್ನು ವಿದ್ಯಾರ್ಥಿಗಳಗೆ ನೀಡುತ್ತಿದ್ದು, ಶೇ. 100ರಷ್ಟು ಉದ್ಯೋಗದ ಭರವಸೆ ಇದ್ದು ಜಿಲ್ಲೆಯ ಎಸ್‌ಎಸ್‌ಎಲ್‌ಸಿ ತೇರ್ಗಡೆಯಾಗಿರುವ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಟಿಟಿಸಿಯ ಪ್ರಾಂಶುಪಾಲ ವಿನಯ್ ಎಸ್. ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ, ಡಿಪ್ಲೋಮಾ ಇನ್ ಟೂಲ್ ಆಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಮೆಕಾಟ್ರೋನಿಕ್ಸ್ ಮತ್ತೆ ಡಿಪ್ಲೋಮಾ ಇನ್ ಎಲೆಕ್ಟ್ರಿಕಲ್ ಆಂಡ್ ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ಕೋರ್ಸ್ (3+1 ವರ್ಷ) ಹಾಗೂ ವರ್ಷವಿಡಿ ಅಲ್ಪಾವಧಿ ತರಬೇತಿ ಕೋರ್ಸ್‌ಗಳನ್ನು ನಡೆಸುತ್ತಿದ್ದು, ತರಬೇತಿಯನ್ನು ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಗೆ ಶೇ.100ರಷ್ಟು ಉದ್ಯೋಗ ಸಿಗಲಿದೆ ಎಂದರು.



ಪತ್ರಿಕಾಗೋಷ್ಠಿಯಲ್ಲಿ ಜಿಟಿಟಿಸಿಯ ಪ್ರಾಂಶುಪಾಲ ವಿನಯ್ ಎಸ್. ಮಾತನಾಡಿದರು, ಉಪನ್ಯಾಸಕ ಅಕ್ಷಯ್, ಬೋಧಕ ವಿಜಯ್ ಇದ್ದರು.

ದ್ವಿತೀಯ ಪಿಯು-(ವಿಜ್ಞಾನ) ಮತ್ತು ಐಟಿಐ ಉತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ದ್ವಿತೀಯ ವರ್ಷಕ್ಕೆ ಪಾರ್ಶ್ವ ಪ್ರವೇಶಾತಿ ಸೌಲಭ್ಯವಿರುತ್ತದೆ. ತತ್ಸಂಬಂದ 2026-27ನೇ ಸಾಲಿನ ಪ್ರವೇಶಾತಿಯು ಪ್ರರಂಭಗೊಂಡಿದ್ದು, ಉದ್ಯೋಗಾವಕಾಶಕ್ಕೆ ನೆರವಾಗುವ ಅಲ್ಪಾವಧಿ ಮತ್ತು ದೀರ್ಘಾವಧಿಯ ತರಬೇತಿಗಳನ್ನು ನೀಡುತ್ತಿದ್ದು ಜಿಲ್ಲೆಯ ಯುವ ಸಮುದಾಯಕ್ಕೆ ಹೆಚ್ಚಿನ ಅವಕಾಶವಿದೆ ಎಂದರು.

ವಿಶೇಷವೆಂದರೆ ತರಬೇತಿ ಪಡೆದ ಎಲ್ಲ ವಿದ್ಯಾರ್ಥಿಗಳಿಗೆ ನೌಕರಿ ಅವಕಾಶ ಲಭಿಸಿದೆ. 180 ವಿದ್ಯಾರ್ಥಿಗಳಿಗೆ ಅವಕಾಶವಿದ್ದು, ದ್ವಿತೀಯ ಪಿಯು-(ವಿಜ್ಞಾನ) 10 ಮಂದಿ ವಿದ್ಯಾರ್ಥಿಗಳಿಗೆ ಅವಕಾಶವಿದೆ ಎಂದರು.

ವಿದ್ಯಾರ್ಥಿಗಳಿಗೆ ದೇಶ, ವಿದೇಶಗಳಲ್ಲೂ ಹೆಚ್ಚಿನ ಉದ್ಯೋಗ ಅವಕಾಶ ಇರುವ ಹಿನ್ನಲೆ ಕೋರ್ಸು ಪ್ರವೇಶಕ್ಕೆ ಹೆಚ್ಚಿನ ಬೇಡಿಕೆ ಇದೆ ಎಂದರು.

ಎಸ್‌ಎಸ್‌ಎಲ್‌ಸಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ತರಬೇತಿ ಕೇಂದ್ರದಲ್ಲಿ ಇತರೆ ಸರ್ಟಿಫೈಡ್ ಡಿಪ್ಲೊಮಾ ಕೋರ್ಸು ವ್ಯಾಸಂಗ ಮಾಡಲು ಅನುಕೂಲ ಮಾಡಿಕೊಡಲಾಗಿದೆ. ಟೂಲ್ ಮ್ಯಾನುಫ್ಯಾಕ್ಚರಿಂಗ್, ಟೂಲ್ ರೂಂ ಮೆಷಿನಿಸ್ಟ್, ಟೂಲ್ ಅಂಡ್ ಟೆಕ್ನಿಷಿ ಯನ್ ಕೋರ್ಸುಗಳಲ್ಲಿ ತರಬೇತಿ ನೀಡಲಾಗುತ್ತಿದೆ ಎಂದರು.

ತರಬೇತಿ ಕೇಂದ್ರದಲ್ಲಿ ಟೂಲ್ ರೂಂ ಮೆಷಿನಿಸ್ಟ್, ಸಿಎನ್‌ಸಿ ಟೆಕ್ನಾಲಜಿಸ್ಟ್ ಕ್ಯಾಡ್/ಕ್ಯಾಮ್ ಸ್ಪೆಷಲಿಸ್ಟ್, ಟರ್ನರ್, ಮಿಲ್ಲರ್ ವಿಷಯದಲ್ಲಿ ಅಲ್ಪಾವಧಿಯ ತರಬೇತಿಯನ್ನು ನೀಡಿ ಉದ್ಯೋಗಾವಕಾಶ ಕಲ್ಪಿಸಲಾಗುತ್ತಿದೆ ಎಂದರು.

ಟೂಲ್ ರೂಂ ಮೆಷಿನಿಸ್ಟ್, ಸಿಎನ್‌ಸಿ ಟರ್ನಿಂಗ್ ಮೆನ್ ಆಪರೇಟರ್, ಸಿಎನ್‌ಸಿ ಮಿಲ್ಲಿಂಗ್ ಮೆನ್ ಆಪರೇಟರ್ ತರಬೇತಿಯನ್ನು ಗ್ರಾಮೀಣ ಅಭ್ಯರ್ಥಿಗಳು ಪಡೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ನೂತನ ಸೌಕರ್ಯ, ತಂತ್ರ ವಿಧಾನಗಳನ್ನು ಬಳಸಿಕೊಂಡು ಕೈಗಾರಿಕೆಗಳಲ್ಲಿ ಗರಿಷ್ಟ ಉತ್ಪಾದನೆಗಾಗಿ ತರಬೇತಿ ಹಾಗೂ ಆವಿಷ್ಕಾರಕ್ಕಾಗಿ ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸುವ ಮಹತ್ತರ ಗುರಿಯೊಂದಿಗೆ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ ಆರಂಭವಾಗಿದೆ ಎಂದರು.

ಶೇ.30 ಕ್ಲಾಸ್‌ರೂಮ್ ತರಬೇತಿ, ಶೇ.70 ಪ್ರಾಯೋಗಿಕ ತರಬೇತಿ, ಉದ್ಯಮಗಳ ಬೇಡಿಕೆಗೆ ಅನುಸಾರ ಪಠ್ಯಕ್ರಮ ರಚನೆ, ಸ್ಟೈಫಂಡ್ ಸಹಿತ ಒಂದು ವರ್ಷ ಅವಧಿಯ ಇಂಟರ್ನ್‌ಶಿಪ್, ಶೇ.100ರಷ್ಟು ಉದ್ಯೋಗಾವಕಾಶವಿದೆ ಎಂದರು.

ಗುಂಡ್ಲುಪೇಟೆ ಪಟ್ಟಣದ ಹೊಸೂರು ರಸ್ತೆಯಲ್ಲಿರುವ ದುಂದಾಸನಪುರದ ಸರಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದಲ್ಲಿ ಕೋರ್ಸುಗಳ ಪ್ರವೇಶಕ್ಕಾಗಿ ಈಗಾಗಲೇ ಅರ್ಜಿಗಳನ್ನು ವಿತರಿಸಲಾಗುತ್ತಿದೆ. ಜಿಲ್ಲೆಯ ಏಕೈಕ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರದ ಪ್ರಯೋಜನವನ್ನು ಪೂರ್ಣ ಪ್ರಮಾಣದಲ್ಲಿ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು. ಹೆಚ್ಚಿನ ಮಾಹಿತಿಗೆ 9945479700 ಸಂಪರ್ಕಿಸುವಂತೆ ತಿಳಿಸಿದರು. ಉಪನ್ಯಾಸಕ ಅಕ್ಷಯ್, ಬೋಧಕ ವಿಜಯ್ ಇದ್ದರು.

ಶಿಕ್ಷಕ ಮಹದೇವಸ್ವಾಮಿಗೆ ಕಾಯಕಯೋಗಿ ಗರಿ

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್‌ನ ಉನ್ನತ ಗೌರವಕ್ಕೆ ಪಾತ್ರ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ಕೊಡಲ್ಪಡುವ ರಾಜ್ಯಮಟ್ಟದ ಕಾಯಕಯೋಗಿ ಪ್ರಶಸ್ತಿಯನ್ನು ತಾಲೂಕಿನ ನಂಜೇದೇವನಪುರ ಸರ್ಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಎಸ್. ಮಹದೇವಸ್ವಾಮಿ ಕೊತ್ತಲವಾಡಿ ಅವರಿಗೆ ಪ್ರದಾನ ಮಾಡಲಾಯಿತು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಸೂಲಿಬೆಲೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಪರಿಷತ್‌ನ ಸಂಸ್ಥಾಪಕ ಅಧ್ಯಕ್ಷ ಹುಲಿಕಲ್ ನಟರಾಜ್, ಇಸ್ರೋ ಮಾಜಿ ಅಧ್ಯಕ್ಷ ಕಿರಣ್‌ಕುಮಾರ್, ಡಾ. ಅಂಜನಪ್ಪ ಪ್ರಶಸ್ತಿ ಪ್ರದಾನಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ಜಿಲ್ಲಾಧ್ಯಕ್ಷ ಕಿರಣ್ ರಾಜ್, ಎಂ. ವೀರಶೈವ ಲಿಂಗಾಯಿತ ನೌಕರ ಸಂಘದ ಅಧ್ಯಕ್ಷ ಸಿದ್ದಮಲ್ಲಪ್ಪ, ಸರ್ಕಾರಿ ನೌಕರರ ಸಂಘದ ಉಪಾಧ್ಯಕ್ಷ ನಾಗರಾಜು, ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಜಿಲ್ಲಾ ಸಹಕಾರ್ಯದರ್ಶಿ ದೊಡ್ಡರಸಯ್ಯ, ಜಿಲ್ಲಾ ಸಹ ಕಾರ್ಯದರ್ಶಿ ಮಲ್ಲೇಶ್, ಸಂಘಟನಾ ಕಾರ್ಯದರ್ಶಿ ಮಹೇಶ್, ಗುಂಡ್ಲುಪೇಟೆ ತಾಲ್ಲೂಕು ಮಾಜಿ ಅಧ್ಯಕ್ಷ ಗುರುಪ್ರಸಾದ್, ವಾಗ್ಮಿ ಮಹೇಂದ್ರ ಪಟೇಲ್, ಎನ್ ಪಿ ಎಸ್ ಸಂಘಟನಾ ಕಾರ್ಯದರ್ಶಿ ಪ್ರಭುಸ್ವಾಮಿ, ಮರಿಸಿದ್ದಶೆಟ್ಟರು ಹಾಜರಿದ್ದು ಅಭಿನಂದಿಸಿದ್ದರು.



ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ ವತಿಯಿಂದ ಕೊಡಲ್ಪಡುವ ರಾಜ್ಯಮಟ್ಟದ ಕಾಯಕಯೋಗಿ ಪ್ರಶಸ್ತಿಯನ್ನು ತಾಲೂಕಿನ ನಂಜೇದೇವನಪುರ ಸರ್ಕಾರಿ ಪ್ರೌಢಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಎಸ್. ಮಹದೇವಸ್ವಾಮಿ ಕೊತ್ತಲವಾಡಿ ಅವರಿಗೆ ಪ್ರದಾನ ಮಾಡಲಾಯಿತು.

7 ಸಕ್ಕರೆ ಕಾರ್ಖಾನೆ ವಿರುದ್ಧ ಕ್ರಮ ಕೈಗೊಳ್ಳಿ: ಗೂಳಿಗೌಡ

ರೈತರಿಗೆ ಕೊಡಬೇಕಾದ ಹಣಕ್ಕೆ ತಡೆ ಹಿನ್ನೆಲೆ ಸೂಕ್ತ ಕ್ರಮಕ್ಕಾಗಿ ರಾಜ್ಯ ಸರ್ಕಾರಕ್ಕೆ ಒತ್ತಾಯ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

2025-26ನೇ ಹಂಗಾಮಿನ ಕಬ್ಬು ಬೆಳೆಗಾರರ ಬಾಕಿ ಪ್ರೋತ್ಸಾಹಧನ ಪಾವತಿ, ರೈತರ ಬ್ಯಾಂಕ್ ಖಾತೆ ವಿವರಗಳನ್ನು ನೀಡಲು ನಿರಾಕರಿಸುತ್ತಿರುವ ಏಳು ಸಕ್ಕರೆ ಕಾರ್ಖಾನೆಗಳ ವಿರುದ್ಧ ಕಾನೂನು ಕ್ರಮ ಜರುಗಿಸುವಂತೆ ಗ್ಯಾರಂಟಿ ಪ್ರಾಧಿಕಾರದ ರಾಜ್ಯ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಕ್ಕರೆ ಖಾತೆ ಸಚಿವ ಶಿವಾನಂದ ಪಾಟೀಲ್ ಅವರಲ್ಲಿ ಮನವಿ ಮಾಡಿರುವ ಅವರು, 2025-26ನೇ ಸಾಲಿನ ಹಂಗಾಮಿನಲ್ಲಿ ರಾಜ್ಯದ ರೈತ ಸಮುದಾಯದ ಆರ್ಥಿಕ ಹಿತದೃಷ್ಟಿಯಿಂದ ಸರ್ಕಾರ ಪ್ರತಿ ಟನ್ ಕಬ್ಬಿಗೆ 100 ರು. ಹೆಚ್ಚುವರಿ ಪ್ರೋತ್ಸಾಹಧನ ಘೋಷಿಸಿತ್ತು. ಆದರೆ. ದಕ್ಷಿಣ ಕರ್ನಾಟಕದ ಬನ್ನಾರಿ ಅಮ್ಮನ್ ಶುಗರ್ಸ್ (ಕೊಳ್ಳೇಗಾಲ), ಚಾಮುಂಡೇಶ್ವರಿ ಶುಗರ್ಸ್ ಲಿ (ಚನ್ನರಾಯಪಟ್ಟಣ), ಕೋರಮಂಡಲ ಶುಗರ್ಸ್ (ಕೆ.ಆರ್.ಪೇಟೆ), ಚಾಮುಂಡೇಶ್ವರಿ ಶುಗರ್ಸ್ ಲಿಮಿಟೆಡ್ (ಮದ್ದೂರು), ಎಂಆರ್‌ಎನ್ ಕೇನ್ ಪವರ್ ಆ್ಯಂಡ್ ಬಯೋ ರಿಫೈನರೀಸ್ ಪ್ರೈ.ಲಿ (ಪಾಂಡವಪುರ), ಎನ್‌ಎಸ್‌ಎಲ್ ಶುಗರ್ಸ್ ಲಿ. (ಮದ್ದೂರು), ಬನ್ನಾರಿ ಅಮ್ಮನ್ ಶುಗರ್ಸ್ ಲಿಮಿಟೆಡ್ (ನಂಜನಗೂಡು) ಎಂಬ ಖಾಸಗಿ ಕಾರ್ಖಾನೆಗಳ ಹಠಮಾರಿ ಧೋರಣೆ ಮತ್ತು ಕಾನೂನು ಸಂಘರ್ಷದಿಂದ ರೈತರಿಗೆ ತೊಂದರೆಯಾಗಿದೆ ಎಂದು ಆರೋಪಿಸಿದ್ದಾರೆ.

ರಾಜ್ಯದ ಒಟ್ಟು 81 ಕಾರ್ಖಾನೆಗಳ ಪೈಕಿ ಉತ್ತರ ಕರ್ನಾಟಕದ 73 ಕಾರ್ಖಾನೆಗಳು ಸರ್ಕಾರದ ಆದೇಶಕ್ಕೆ ಬದ್ಧವಾಗಿ ರೈತರಿಗೆ ಸಕಾಲದಲ್ಲಿ ಪ್ರತಿ ಟನ್‌ಗೆ ಹೆಚ್ಚುವರಿ 100 ರು.ಗಳನ್ನು ಪಾವತಿ ಮಾಡುತ್ತಿವೆ. ಆದರೆ, ದಕ್ಷಿಣ ಕರ್ನಾಟಕದ ಈ ಏಳು ಖಾಸಗಿ ಕಾರ್ಖಾನೆಗಳು ಸರ್ಕಾರದ ಆದೇಶ ಪ್ರಶ್ನಿಸಿ ನ್ಯಾಯಾಲಯದ ಮೊರೆ ಹೋಗಿವೆ. ಅಲ್ಲದೆ, ಜಿಲ್ಲಾಡಳಿತಗಳ ಸಭೆ ಮತ್ತು ಸೂಚನೆಗಳನ್ನು ಕಿಂಚಿತ್ತೂ ಲೆಕ್ಕಿಸದೆ, ರೈತರಿಗೆ ಕೊಡಬೇಕಾದ ಹಣ ತಡೆಯುತ್ತಿವೆ ಎಂದು ದೂರಿದ್ದಾರೆ.

ಸಿಲಿಂಡರ್ ದರ ₹993 ಏರಿಕೆಗೆ ಖಂಡನೆ: ಪ್ರತಿಭಟನೆ

ಭಾರಿ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ವತಿಯಿಂದ ಚಾಮರಾಜನಗರದಲ್ಲಿ ಹೋರಾಟ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ಸಿಲಿಂಡರ್ ಬೆಲೆ ಏರಿಕೆ ಖಂಡಿಸಿ ಕರ್ನಾಟಕ ಸೇನಾಪಡೆ ವತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಭುವನೇಶ್ವರಿ ವೃತ್ತದಲ್ಲಿ ಕರ್ನಾಟಕ ಸೇನಾಪಡೆ ಅಧ್ಯಕ್ಷ ಚಾ.ರಂ. ಶ್ರೀನಿವಾಸಗೌಡ ಅವರ ನೇತೃತ್ವದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಲಿ ಸಿಲಿಂಡರ್ ಪ್ರದರ್ಶಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಶ್ರೀನಿವಾಸಗೌಡ ಮಾತನಾಡಿ, ಕೇಂದ್ರ ಸರ್ಕಾರ ವಾಣಿಜ್ಯ ಅಡುಗೆ ಅನಿಲ ಸಿಲಿಂಡರ್ ದರವನ್ನು 993 ರು. ಹೆಚ್ಚಳ ಮಾಡಿದ್ದು, ಪದೇ ಪದೇ ಅಗತ್ಯ ವಸ್ತುಗಳ ಬೆಲೆ ಏರಿಕೆ ಮಾಡುತ್ತಿರುವುದು ಅತ್ಯಂತ ಖಂಡನೀಯವಾದದ್ದು, ಕೂಡಲೇ ದರ ಹಿಂಪಡೆಯಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.


ಚಾಮರಾಜನಗರದ ಭುವನೇಶ್ವರಿ ವೃತ್ತದಲ್ಲಿ ಕರ್ನಾಟಕ ಸೇನಾಪಡೆ ವತಿಯಿಂದ ಪ್ರತಿಭಟನಾಕಾರರು ರಾಷ್ಟ್ರೀಯ ಹೆದ್ದಾರಿಯಲ್ಲಿ ಖಾಲಿ ಸಿಲಿಂಡರ್ ಪ್ರದರ್ಶಿಸಿ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆಯಲ್ಲಿ ಶಾ.ಮುರಳಿ, ಕಂಡಕ್ಟರ್: ಚಾ.ಸಿ. ಸೋಮನಾಯಕ, ಪಣ್ಯದಹುಂಡಿ ರಾಜು, ಮಹೇಶ್ ಗೌಡ, ಚಾ.ವೆಂ. ರಾಜ್ ಗೋಪಾಲ್, ಆಟೋ ಲಿಂಗರಾಜು, ಅಮಚವಾಡಿ ರಾಜು, ರಾಚಪ್ಪ, ಮುತ್ತಿಗೆ ಗೋವಿಂದರಾಜು, ಹೊಮ್ಮ ಲೋಕೇಶ್, ಮಂಗಲ ಹೊಸೂರು ಶಿವಣ್ಣ, ನಂಜುಂಡಿ, ನಾಗರಾಜ ಶೆಟ್ಟಿ, ನಂಜುಂಡಶೆಟ್ಟಿ, ಆಟೋ ಸುರೇಶ್, ಚಂದ್ರು ಇತರರು ಭಾಗವಹಿಸಿದ್ದರು.

ಎತ್ತೇಗೌಡನದೊಡ್ಡಿ ಗ್ರಾಮಕ್ಕೆ ಶಾಸಕ ಪುಟ್ಟರಂಗಶೆಟ್ಟಿ ಭೇಟಿ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ತಾಲೂಕಿನ ಕಾಡಂಚಿನ ಪುಣಜನೂರು ಗ್ರಾಮಪಂಚಾಯ್ತಿಯ ಎತ್ತೇಗೌಡನದೊಡ್ಡಿ ಗ್ರಾಮಕ್ಕೆ ಶಾಸಕ ಸಿ. ಪುಟ್ಟರಂಗಶೆಟ್ಟಿ ಭೇಟಿ ನೀಡಿ, ನಿವಾಸಿಗಳ ಅಹವಾಲು ಸ್ವೀಕರಿಸಿದರು. ಗ್ರಾಮದಲ್ಲಿ ಕುಡಿಯುವ ನೀರು ಸರಬರಾಜು, ರಸ್ತೆ ಮತ್ತು ಚರಂಡಿ ಸೇರಿದಂತೆ ಮೂಲಸೌಕರ್ಯ ಒದಗಿಸುವ ಕುರಿತು ಪರಿಶೀಲಿಸಿದರು. ಇದೇ ವೇಳೆ 40 ಲಕ್ಷ ರು.ವೆಚ್ಚದಲ್ಲಿ ಸಿಮೆಂಟ್ ಕಾಂಕ್ರಿಟ್ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದರು.

ಇದೇ ವೇಳೆ ಮಾತನಾಡಿ, ಆಶ್ರಯ ಮನೆ, ಗಂಗಾ ಕಲ್ಯಾಣ ಯೋಜನೆ ಸೇರಿದಂತೆ ಸರ್ಕಾರ ಮಂಜೂರು ಮಾಡುವ ಅನುದಾನ ಹಾಗೂ ಸೌಲಭ್ಯಗಳನ್ನು ಜನರಿಗೆ ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಸಂಬಂಧಪಟ್ಟ ಗುತ್ತಿಗೆದಾರರು ಗುಣಮಟ್ಟದ ರಸ್ತೆ ನಿರ್ಮಾಣ ಮಾಡಿ ಈ ಭಾಗದ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸೂಚನೆ ನೀಡಿದರು. ಹಾಡಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ಅಂತರ್ಜಲ ಪರೀಕ್ಷಕರನ್ನು ಕರೆಸಿ, ಪಾಯಿಂಟ್ ಮಾಡಿಸಿ, ನೀರುಬರುವ ಸಾಧ್ಯತೆ ಕಂಡುಬಂದರೆ ಕೊಳವೆ ಬಾವಿಕೊರೆಸಿ, ಜನರಿಗೆ ನೀರುಕೊಡಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಶಾಸಕರು ಅಂಗನ ವಾಡಿಗೆ ಭೇಟಿನೀಡಿ, ಮೂಲಸೌಕರ್ಯ ಕುರಿತು ಪರಿಶೀಲಿಸಿದರು. ತಮಗೆ ವಾಸಿಸಲು ಮನೆಗಳನ್ನು ನಿರ್ಮಿಸಿ ಕೊಡಬೇಕು ಎಂದು ನಿವಾಸಿಗಳು ಇದೇ ವೇಳೆ ಶಾಸಕರಿಗೆ ಮನವಿ ಮಾಡಿದರು.

ಪಿಎಸಿಸಿ ಅಧ್ಯಕ್ಷ ಮಣಿನಾಯಕ, ಗ್ರಾಪಂ ಮಾಜಿ ಉಪಾಧ್ಯಕ್ಷ ಶಿವನಾಯಕ, ಮುಖಂಡ ನಾಗವಳ್ಳಿ ನಾಗಯ್ಯ, ಮಹದೇವ ನಾಯಕ ಕೆಆರ್‌ಐಡಿಎಲ್ ಎಂಜಿನಿಯರ್‌ಗಳಾದ ಅರುಣ್, ಮಹದೇವ ಪ್ರಸಾದ್ ಎತ್ತೇಗೌಡನದೊಡ್ಡಿ ಗ್ರಾಮಸ್ಥರು ಹಾಜರಿದ್ದರು.

ಅವಧಿ ಮುಗಿದ ಸಾರಿಗೆ ಬಸ್ಸಿಂದ ರಸ್ತೆಯಲ್ಲಿ ಹೆಚ್ಚಿದ ಅಪಘಾತ

ಸಾರಿಗೆ ಇಲಾಖೆ ನಿರ್ಲಕ್ಷ್ಯದಿಂದ ದುರಂತ ಹೆಚ್ಚಳ: ಸಂಘ-ಸಂಸ್ಥೆ ಮುಖಂಡರ ಆರೋಪ

• **ಕನ್ನಡಪ್ರಭ ವಾರ್ತೆ** ಹನೂರು

ಮಲೆ ಮಹದೇಶ್ವರ ಬೆಟ್ಟಕ್ಕೆ ದಿನನಿತ್ಯ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದ್ದು, ಅದೇ ರೀತಿ ಅಪಘಾತಗಳು ಹೆಚ್ಚುತ್ತಿವೆ. ಅಪಘಾತ ಹೆಚ್ಚಳಕ್ಕೆ ಕರ್ನಾಟಕ ರಾಜ್ಯ ಸಾರಿಗೆ ಸಂಸ್ಥೆಯ ಅವಧಿ ಮುಗಿದಿರುವ ವಾಹನಗಳ ಬಳಕೆ ಮತ್ತು ಚಾಲಕರಗಳ ನಿರ್ಲಕ್ಷವೇ ಅಪಘಾತಕ್ಕೆ ಕಾರಣವಾಗಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಂಘ-ಸಂಸ್ಥೆಗಳು ಮತ್ತು ಪ್ರಜ್ಞಾವಂತ ನಾಗರಿಕರು ವ್ಯಾಪಕವಾಗಿ ಖಂಡನೆ ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಮಲೆ ಮಹದೇಶ್ವರ ಬೆಟ್ಟಕ್ಕೆ ಅಪಾರ ಸಂಖ್ಯೆಯ ಭಕ್ತಾದಿಗಳು ಭೇಟಿ ನೀಡುತ್ತಿದ್ದು, ಕೆಎಸ್‌ಆರ್‌ಟಿಸಿ ಗುಣಮಟ್ಟದ ಬಸ್‌ಗಳನ್ನು ಬಿಡುವ ಬದಲು ಕಳಪೆ ಬಸ್‌ಗಳನ್ನು ನೀಡುತ್ತಿರುವುದರಿಂದ ಅಲ್ಲಲ್ಲಿ ಕೆಟ್ಟು ನಿಲ್ಲುತ್ತಿವೆ. ಅಲ್ಲದೇ ಅಪಘಾತಗಳು ಆಗಾಗ್ಗೆ ಸಂಭವಿಸುತ್ತಲೆ ಇದ್ದು, ಜೊತೆಗೆ ಚಾಲಕರು ಸಹ ಮದ್ಯಪಾನ ಮಾಡಿ ವಾಹನ ಚಲಾವಣೆ ಮಾಡತ್ತಿರುವುದರಿಂದ ಇಂತಹ ದುರ್ಘಟನೆಗಳು ನಡೆಯುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ನಾಗರಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಭಕ್ತರ ಪ್ರಾಣದ ಜೊತೆ ಆಟವಾಡದಿರಲಿ ಸಂಸ್ಥೆ: ಶ್ರೀ ಕ್ಷೇತ್ರಕ್ಕೆ ಬರುವ ಭಕ್ತಾದಿಗಳಿಗೆ ಕೆಎಸ್‌ಆರ್‌ಟಿಸಿ ಸೂಕ್ತ ರಕ್ಷಣೆ ಇಲ್ಲ. ಜೊತೆಗೆ ಅನನುಭವಿ ಚಾಲಕರನ್ನು ನಿಯೋಜಿಸುತ್ತಿರುವುದರಿಂದ ರಾಜ್ಯ ಸಾರಿಗೆ ಇಲಾಖೆ ಅಧಿಕಾರಿಗಳು ಉತ್ತಮ ಗುಣಮಟ್ಟದ ಸಾರಿಗೆ ಬಸ್‌ಗಳನ್ನು ಬಿಡುವ ಮೂಲಕ ಇಂಥ ದುರ್ಘಟನೆಗಳು ಜರುಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ರಾಜ್ಯ ಸಾರಿಗೆ ಇಲಾಖೆ ಕ್ರಮ ಕೈಗೊಳ್ಳಬೇಕು ಎಂದು ನಾಗರಿಕರು ಆಗ್ರಹಿಸಿದ್ದಾರೆ.

ಕಲಾ ಪ್ರದರ್ಶನ | ಜೆಎಸ್ಸೆಸ್ ಕಾಲೇಜಿನಲ್ಲಿ ಗಮಕ ವಾಚನ, ವ್ಯಾಖ್ಯಾನ ಕಾರ್ಯಕ್ರಮ

ಗಮಕಕ್ಕೆ ಪ್ರೋತ್ಸಾಹ ಅಗತ್ಯ: ಡಾ.ಕೊಂಗಳಪ್ಪ

• **ಕನ್ನಡಪ್ರಭ ವಾರ್ತೆ** ಕೊಳ್ಳೇಗಾಲ

ಪುರಾತನವಾದ ಗಮಕ ಕಲೆಯನ್ನು ಉಳಿಸಿ ಬೆಳೆಸುವಲ್ಲಿ ಪ್ರತಿಯೊಬ್ಬರು ತಮ್ಮ ಜವಾಬ್ದಾರಿ ಅರಿತುಕೊಳ್ಳಬೇಕು. ಗಮಕ ಕಲೆ ಬಗ್ಗೆ ಯುವ ಪೀಳಿಗೆ ಹೆಚ್ಚಿನ ಆಸಕ್ತಿ ವಹಿಸುವ ಮೂಲಕ ಪ್ರೋತ್ಸಾಹಿಸಬೇಕು ಎಂದು ಜೆಎಸ್‌ಎಸ್ ಮಹಿಳಾ ಪದವಿ ಕಾಲೇಜು ಪ್ರಾಂಶುಪಾಲ ಡಾ. ಎಚ್. ಎಸ್. ಕೊಂಗಳಪ್ಪ ಹೇಳಿದರು.

ಕರ್ನಾಟಕ ಗಮಕ ಕಲಾ ಪರಿಷತ್ತು ಜಿಲ್ಲಾ ಘಟಕ, ಜೆಎಸ್‌ಎಸ್ ಸಂಸ್ಥೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕನ್ನಡ ಸಾಹಿತ್ಯ ಪರಿಷತ್ತು ತಾಲೂಕು ಘಟಕದಿಂದ ಜೆಎಸ್‌ಎಸ್ ಕಾಲೇಜಿನ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಗಮಕ ವಾಚನ, ವ್ಯಾಖ್ಯಾನ ಮತ್ತು ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು. ಕಲೆ ಉಳಿಸಿ, ಬೆಳೆಸಿ ಪ್ರೋತ್ಸಾಹಿಸುವಲ್ಲಿ ಪ್ರತಿಭೆಯವರ ಕತ9ವ್ಯವೂ ಆಗಿದೆ. ಕಲೆಯನ್ನು ಆರಾಧಿಸುವ ಮೂಲಕ ನಿಟ್ಟಿನಲ್ಲಿ ನಾವೆಲ್ಲರೂ ಮುಂದಾಗೋಣ ಎಂದರು.

ಈ ವೇಳೆ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕರ್ನಾಟಕ ಗಮಕ ಕಲಾ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ್ ಎನ್. ಋಗ್ವೇದಿ ಮಾತನಾಡಿ, ಪ್ರಾಚೀನ ಕಲೆಯಾದ ಗಮಕ ಕಲೆ 64 ವಿದ್ಯೆಗಳಲ್ಲಿ ವಿಶೇಷವಾದ ಕಲೆ. ವಾಲ್ಮೀಕಿ ರಾಮಾಯಣ ಕಾಲದಿಂದ ಪ್ರಚಲಿತದಲ್ಲಿರುವ ಪ್ರಮುಖ ಕಲೆ. ಸ್ವತಃ ಲವ ಮತ್ತು ಕುಶಯಿಂದ ವಾಲ್ಮೀಕಿ ಅವರು ಗಮಕವಾಚನ ವ್ಯಾಖ್ಯಾನ ಮಾಡಿಸಿದ ಇತಿಹಾಸವಿದೆ. ವೇದಗಳಲ್ಲಿಯೂ ಗಮಕದ ದಾಖಲೆಗಳಿವೆ. ಕುಮಾರವ್ಯಾಸ ಭಾರತ, ವಾಲ್ಮೀಕಿ ರಾಮಾಯಣ, ತೊರೆವೆ ರಾಮಾಯಣ ಜನಪ್ರಿಯವಾಗಿದೆ. ಗಮಕದ ಮೂಲಕ ನಾಡಿನ ಎಲ್ಲೆಡೆ ಹೆಚ್ಚು ಪ್ರಸಿದ್ಧಿಯಾಗಿದೆ. ಆದರೆ ಯುವ ಜನಾಂಗ ಈ ಕಲೆಯನ್ನು ಬೆಳೆಸಿಕೊಳ್ಳುವಲ್ಲಿ ನಿರಾಸಕ್ತಿಯನ್ನು ಹೊಂದಿದ್ದಾರೆ ಎಂದರು.



ಕೊಳ್ಳೇಗಾಲ ಪಟ್ಟಣದ ಜೆಎಸ್ಸೆಸ್ ಮಹಿಳಾ ಕಾಲೇಜಿನಲ್ಲಿ ಆಯೋಜಿಸಿದ್ದ ಗಮಕ ವಾಚನ, ವ್ಯಾಖ್ಯಾನ ಸಮಾರಂಭವನ್ನು ಡಾ. ಕೊಂಗಳಪ್ಪ ಉದ್ಘಾಟಿಸಿದರು. ನಾಗರಾಜು ಕೊಂಗ್ರಳ್ಳಿ, ಸುರೇಶ್ ಇನ್ನಿತರಿದ್ದರು.

ಈ ಸಂದರ್ಭದಲ್ಲಿ ಮೈಸೂರಿನ ಯುವ ಗಮಕಿ ಕಲಾವಿದರುಗಳಾದ ಕುಮಾರಿ ಪ್ರತಿಕ್ಷ ಮತ್ತು ಅನನ್ಯ ತಮ್ಮ ಸುಮಧುರ ಕಂಠದ ಮೂಲಕ ಗಮಕ ವಾಚಿಸಿ ನೆರೆದಿದ್ದ ಪ್ರೇಕ್ಷಕರ ಗಮನ ಸೆಳೆದರು.

ಈ ವೇಳೆ ಕರ್ನಾಟಕ ಕಲಾ ಪರಿಷತ್ತಿನ ಸಂಘ ಸಂಸ್ಥೆಗಳ ಪ್ರತಿನಿಧಿ ನಿರಂಜನ್, ತಾಲೂಕು ಅಧ್ಯಕ್ಷರಾದ ಕೊಂಗರಹಳ್ಳಿ ನಾಗರಾಜು ಇನ್ನಿತರಿದ್ದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ, ಅನ್ನಸಂತರ್ಪಣೆ

ಕಾಗಲವಾಡಿಯಲ್ಲಿ ವಿಜೃಂಭಣೆಯ ಅಂಬೇಡ್ಕರ್ ಜಯಂತಿ ಆಚರಣೆ

• **ಕನ್ನಡಪ್ರಭ ವಾರ್ತೆ** ಚಾಮರಾಜನಗರ

ತಾಲೂಕಿನ ಕಾಗಲವಾಡಿಯಲ್ಲಿ ಗ್ರಾಮದಲ್ಲಿ ಡಾ. ಬಿ.ಆರ್. ಅಂಬೇಡ್ಕರ್‌ರವರ 135ನೇ ಜಯಂತಿಯನ್ನು ಗ್ರಾಮದ ಮುಖಂಡರು ಹಾಗೂ ಗ್ರಾಮಸ್ಥರು ವಿಜೃಂಭಣೆಯಿಂದ ಆಚರಿಸಿದರು.

ಗ್ರಾಮದ ಮುಖ್ಯ ಸರ್ಕಲ್‌ನಲ್ಲಿ ಅಂಬೇಡ್ಕರ್‌ರ ಬೃಹತ್ ಕಟೌಟ್ ಅಳವಡಿಸಿ, ವಿದ್ಯುತ್ ದೀಪಾಲಂಕಾರವನ್ನು ಮಾಡಲಾಯಿತು. ಪ್ರಮುಖ ಬೀದಿಗಳಲ್ಲಿ ವಿದ್ಯುತ್ ದೀಪಗಳ ಅಲಂಕಾರದೊಂದಿಗೆ ಗ್ರಾಮದ ಯಜಮಾನರು ಹಾಗೂ ಮುಖಂಡರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಮೇಣ ಬತ್ತಿ ಹಚ್ಚಿ ಪ್ರಾರ್ಥಿಸಿದರು. ನಂತರ ಅಂಬೇಡ್ಕರ್ ಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಸಂವಿಧಾನ ಪೀಠಿಕೆಯನ್ನು ವಾಚನ ಮಾಡಿದರು.

ಗ್ರಾಮದ ಅಂಬೇಡ್ಕರ್ ಭವನದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದು 16ಕ್ಕು ಹೆಚ್ಚು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು. ನಂತರ ಗ್ರಾಮಸ್ಥರಿಗೆ ಸಹ ಪಂಕ್ತಿ ಭೋಜನ ವ್ಯವಸ್ಥೆ ಮಾಡಲಾಯಿತು. ಗ್ರಾಮದ ಪ್ರಮುಖ ಬೀದಿಗಳಲ್ಲಿ ಅಂಬೇಡ್ಕರ್ ಅವರ ಭಾವಚಿತ್ರ ಮೆರವಣಿಗೆ ವಿವಿಧ ಜನಪದ ಕಲಾ ತಂಡಗಳೊಂದಿಗೆ ನಡೆಯಿತು.



ಕಾರ್ಯಕ್ರಮದಲ್ಲಿ ಗ್ರಾಮದ ಯಜಮಾನರಾದ ಮಹದೇವಯ್ಯ, ಮಹದೇವಸ್ವಾಮಿ, ರಮೇಶಮೂರ್ತಿ, ನಿರಂಜನ್, ರಮೇಶ, ರಾಜೇಶ ಅಂಬೇಡ್ಕರ್ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು ತಾಪಂ. ಮಾಜಿ ಸದಸ್ಯ ಶಿವಸ್ವಾಮಿ, ಕಾಗಲವಾಡಿ ಚಂದ್ರು, ಪ್ರವೀಣ್, ಗ್ರಾಪಂ ಮಾಜಿ ಉಪಾಧ್ಯಕ್ಷ ಮರಿಸ್ವಾಮಿ, ಮಾಜಿ ಸದಸ್ಯರು ಗ್ರಾಮಸ್ಥರು ಭಾಗವಹಿಸಿದ್ದರು.